Akashvani: Bangalore
National Bulletin In Kannada
18.06.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
18.06.2026: 13.10hrs
********

ಮುಖ್ಯಾಂಶಗಳು :

1. ಫ್ರಾನ್ಸ್‌ನಲ್ಲಿಂದು ಪ್ರಮುಖ ಕೈಗಾರಿಕಾ ಮತ್ತು ವಾಣಿಜ್ಯ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ
2. ಐದು ದಿನಗಳ ಪ್ರವಾಸಕ್ಕಾಗಿ ಇಂದಿನಿಂದ ರಾಷ್ಟ್ರಪತಿ ದ್ರೌಪದಿ ಮುರ್ಮು ಮಧ್ಯಪ್ರದೇಶ ಮತ್ತು ಒಡಿಶಾಗೆ ಭೇಟಿ
3. ಆಹಾರ ಸುರಕ್ಷತೆಗಾಗಿ ಉತ್ತಮ ಗುಣಮಟ್ಟದ ಚಾಕು, ಬ್ಲೇಡ್‌ಗಳನಷ್ಟೇ ಬಳಸಲು ಉದ್ಯಮಿಗಳಿಗೆ ಎಫ್‌ಎಸ್‌ಎಸ್‌ಎಐ ಕಟ್ಟುನಿಟ್ಟಿನ ನಿರ್ದೇಶನ
4. ಕಳೆದ ೧೨ ವರ್ಷ ಅಭಿವೃದ್ಧಿ ಮತ್ತು ಪರಂಪರೆಯ ಸಂಗಮದ ಸುವರ್ಣ ಯುಗ - ಕೇಂದ್ರ ಸಚಿವ ಅಮಿತ್ ಶಾ
5. ಮಕಾವ್ ಓಪನ್ ಬ್ಯಾಡ್ಮಿಂಟನ್ ; ಭಾರತದ ಅನ್ಮೋಲ್ ಖಾರ್ಬ್, ಅಶ್ಮಿತಾ ಚಲಿಹಾ ಕ್ವಾರ್ಟರ್ ಫೈನಲ್ ಪ್ರವೇಶ

*********

ಭಾರತ ಮತ್ತು ಫ್ರಾನ್ಸ್ ನಡುವಿನ ಆರ್ಥಿಕ ಹಾಗೂ ಕೈಗಾರಿಕಾ ಸಹಕಾರವನ್ನು ಮತ್ತಷ್ಟು ವಿಸ್ತರಿಸುವ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಪ್ಯಾರಿಸ್‌ನಲ್ಲಿ ಫ್ರಾನ್ಸ್‌ನ ಪ್ರಮುಖ ಕೈಗಾರಿಕಾ ಮತ್ತು ವಾಣಿಜ್ಯ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಸರಣಿ ಉನ್ನತ ಮಟ್ಟದ ಸಭೆಗಳನ್ನು ನಡೆಸಲಿದ್ದಾರೆ. ಪ್ರಧಾನಮಂತ್ರಿಯವರು ಸಾಂಟ್-ಗೋಬೈನ್ ಸಂಸ್ಥೆಯ ಅಧ್ಯಕ್ಷ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬೆನ್ನೈಟ್ ಬಾಜಿನ್ ಅವರೊಂದಿಗೆ ಮಾತಕತೆ ನಡೆಸಲಿದ್ದಾರೆ. ಈ ಸಭೆಯಲ್ಲಿ ಪರಿಸರಸ್ನೇಹಿ ಉತ್ಪಾದನೆ ಮತ್ತು ಸುಸ್ಥಿರ ಮೂಲಸೌಕರ್ಯ ಅಭಿವೃದ್ಧಿಯ ಕುರಿತು ಚರ್ಚೆಗಳು ನಡೆಯಲಿವೆ. ತದನಂತರ, ರೈಲ್ವೆ ಆಧುನೀಕರಣ ಮತ್ತು ಸ್ಮಾರ್ಟ್ ಸಂಚಾರ ಕ್ಷೇತ್ರಗಳಲ್ಲಿ ಸಹಕಾರವನ್ನು ಅನ್ವೇಷಿಸಲು ಆಲ್ಸ್ಟೋಮ್ ಸಂಸ್ಥೆಯ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ಅವರನ್ನು ಪ್ರಧಾನಿ ಭೇಟಿಯಾಗಲಿದ್ದಾರೆ. ತಂತ್ರಜ್ಞಾನ ವಲಯಕ್ಕೆ ಸಂಬಂಧಿಸಿದಂತೆ, ಕೃತಕ ಬುದ್ಧಿಮತ್ತೆ ನಾವೀನ್ಯತೆ ಹಾಗೂ ಜವಾಬ್ದಾರಿಯುತ ತಂತ್ರಜ್ಞಾನ ಆಡಳಿತದ ಕುರಿತು ಮಿಸ್ಟ್ರಲ್ ಎಐ

ಸಂಸ್ಥೆಯ ಸಹ-ಸಂಸ್ಥಾಪಕ ಆರ್ಥರ್ ಮೆನ್ಸ್ ಅವರೊಂದಿಗೆ ಪ್ರಧಾನಮಂತ್ರಿಯವರು ಸಂವಾದ ನಡೆಸಲಿದ್ದಾರೆ.ಸಿಎಂಎ ಸಿಜಿಎಂ ಸಮೂಹದ ಅಧ್ಯಕ್ಷ ಮತ್ತು ಸಿಇಒ ರೊಡಾಲ್ಫ್ ಸಾಡೆ ಅವರೊಂದಿಗಿನ ಭೇಟಿಯೊಂದಿಗೆ ಈ ಸರಣಿ ಸಭೆಗಳು ಮುಕ್ತಾಯಗೊಳ್ಳಲಿವೆ. ಈ ವೇಳೆ ಕಡಲ ವ್ಯಾಪಾರ, ಬಂದರುಗಳ ಆಧುನೀಕರಣ ಮತ್ತು ಸುದೃಢ ಜಾಗತಿಕ ಪೂರೈಕೆ ಸರಪಳಿಗಳ ನಿರ್ಮಾಣದ ಕುರಿತು ಮಹತ್ವದ ಮಾತುಕತೆಗಳು ನಡೆಯಲಿವೆ. ಪ್ರಧಾನಮಂತ್ರಿಯವರ ಈ ಎಲ್ಲಾ ಉನ್ನತ ಮಟ್ಟದ ಭೇಟಿಗಳು ಭಾರತ ಮತ್ತು ಫ್ರಾನ್ಸ್ ದೇಶಗಳ ನಡುವೆ ವೃದ್ಧಿಸುತ್ತಿರುವ ಕಾರ್ಯತಂತ್ರದ ಆರ್ಥಿಕ ಸಹಭಾಗಿತ್ವವನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಲಿವೆ.

*********

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಐದು ದಿನಗಳ ಕಾಲ ಮಧ್ಯಪ್ರದೇಶ ಮತ್ತು ಒಡಿಶಾಗೆ ಅಧಿಕೃತ ಪ್ರವಾಸ ಕೈಗೊಂಡಿದ್ದಾರೆ. ಬೇತುಲ್‌ನಲ್ಲಿಹ ಂದು ಆಯೋಜಿಸಲಾಗಿರುವ 'ಆಧ್ಯಾತ್ಮಿಕ ಜಾಗೃತಿಯ ಮೂಲಕ ಬುಡಕಟ್ಟು ಸಮಾಜದ ಸಬಲೀಕರಣ' ಎಂಬ ಕಾರ್ಯಕ್ರಮದಲ್ಲಿ ಅವರು ಪಾಲ್ಗೊಂಡರು. ಇಂದೋರ್‌ಗೆ ತಲುಪಿದ ಅವರನ್ನು ಮಧ್ಯಪ್ರದೇಶ ರಾಜ್ಯಪಾಲ ಮಂಗೂಬಾಯ್ ಪಟೇಲ್, ಮುಖ್ಯಮಂತ್ರಿ ಮೋಹನ್ ಯಾದವ್ ಹಾಗೂ ಹಲವು ಹಿರಿಯ ನಾಯಕರು ಮತ್ತು ಅಧಿಕಾರಿಗಳು ಬರಮಾಡಿಕೊಂಡರು. ಎರಡನೇ ದಿನದಂದು ಅವರು, ಓಂಕಾರೇಶ್ವರದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಸಿಕಲ್‌ಸೆಲ್ ದಿನಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ತದನಂತರ ಒಡಿಶಾದ ರಾಯರಂಗ್‌ಪುರಕ್ಕೆ ಭೇಟಿ ನೀಡಲಿರುವ ಅವರು, ಏಮ್ಸ್ ಭುವನೇಶ್ವರ ವತಿಯಿಂದ ಆಯೋಜಿಸಲಾದ ವೈದ್ಯಕೀಯ ಶಿಬಿರನ್ನು ಉದ್ಘಾಟಿಸಲಿದ್ದು, ಇದೇ ವೇಳೆ ಕುಸಿಮಿ ಬ್ಲಾಕ್ ವ್ಯಾಪ್ತಿಯ ಗಣಿಗಾರಿಕಾ ಪೀಡಿತ ಗ್ರಾಮಗಳಿಗೆ ಹಮ್ಮಿಕೊಳ್ಳಲಾಗಿರುವ ಬೃಹತ್ ಸಂಯೋಜಿತ ಗ್ರಾಮೀಣ ಕೊಳವೆ ನೀರು ಸರಬರಾಜು ಯೋಜನೆಯನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಇದೇ ೨೧ ರಂದು ರಾಷ್ಟ್ರಪತಿ ಜಬಲ್‌ಪುರದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಯೋಗದಿನದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಐದು ದಿನಗಳಾದ್ಯಂತ ರಾಷ್ಟ್ರಪತಿಯವರು ಇತರ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

*********

ಆಹಾರ ಸಂಸ್ಕರಣೆ ಮತ್ತು ನಿರ್ವಹಣಾ ಚಟುವಟಿಕೆಗಳಲ್ಲಿ ಕೇವಲ ಸುರಕ್ಷಿತ ಹಾಗೂ ತುಕ್ಕು ನಿರೋಧಕ ಸಾಮರ್ಥ್ಯವಿರುವ ಚಾಕು, ಬ್ಲೇಡ್‌ಗಳು ಮತ್ತು ಇತರೆ ಕತ್ತರಿಸುವ ಉಪಕರಣಗಳನ್ನಷ್ಟೇ ಬಳಸಬೇಕು ಎಂದು ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ- ಎಫ್‌ಎಸ್‌ಎಸ್‌ಎಐ ಎಲ್ಲಾ ಆಹಾರ ಉದ್ಯಮಿಗಳಿಗೆ ನಿರ್ದೇಶನ ನೀಡಿದೆ. ಕೆಲವು ಸಂಸ್ಥೆಗಳಲ್ಲಿ ತುಕ್ಕು

ಹಿಡಿದ, ಸವೆದುಹೋದ ಅಥವಾ ಹಾನಿಗೊಳಗಾದ ಅಸುರಕ್ಷಿತ ಪರಿಕರಗಳನ್ನು ಬಳಸುತ್ತಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಈ ಸೂಚನೆ ನೀಡಲಾಗಿದೆ. ಇಂತಹ ದೋಷಪೂರಿತ ಉಪಕರಣಗಳ ಬಳಕೆಯಿಂದ ಆಹಾರವು ಮಲಿನಗೊಂಡು ಗ್ರಾಹಕರ ಆರೋಗ್ಯಕ್ಕೆ ತೀವ್ರ ಅಪಾಯವನ್ನು ಉಂಟುಮಾಡುತ್ತದೆ ಎಂದು ಪ್ರಾಧಿಕಾರ ಎಚ್ಚರಿಸಿದೆ. ಆಹಾರ ತಯಾರಿಕೆ, ಪ್ಯಾಕೇಜಿಂಗ್ ಮತ್ತು ಸಂಗ್ರಹಣೆಯಲ್ಲಿ ಬಳಸುವ ಎಲ್ಲಾ ಪಾತ್ರೆಗಳು ಹಾಗೂ ಉಪಕರಣಗಳು ಕಡ್ಡಾಯವಾಗಿ ನಂಜುರಹಿತ ವಸ್ತುಗಳಿಂದ ಮಾಡಲ್ಪಟ್ಟಿರಬೇಕು ಮತ್ತು ಅವುಗಳನ್ನು ನಿಯಮಿತವಾಗಿ ಕ್ರಿಮಿನಾಶಕ ಪ್ರಕ್ರಿಯೆಗೆ ಒಳಪಡಿಸಬೇಕು ಎಂದು ಸ್ಪಷ್ಟಪಡಿಸಲಾಗಿದೆ. ಈ ಕಟ್ಟುನಿಟ್ಟಿನ ನಿಯಮಗಳನ್ನು ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ೨೦೦೬ರ ಅಡಿಯಲ್ಲಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಾಧಿಕಾರ ಎಚ್ಚರಿಸಿದೆ.

*********

ರಕ್ಷಣಾ ಉತ್ಪಾದನಾ ವಲಯದಲ್ಲಿ ಸ್ವಾವಲಂಬನೆ ಸಾಧಿಸುವ ಪ್ರಮುಖ ಹೆಜ್ಜೆಯಾಗಿ ನಾಳೆ ಮಹಾರಾಷ್ಟ್ರದ ನಾಗ್ಪುರದಲ್ಲಿರುವ ಅಂಬಾ ಝರಿಯಲ್ಲಿ ಯಂತ್ರ ಇಂಡಿಯಾ ಲಿಮಿಟೆಡ್‌ನ ಆರ್ಡ್‌ನೆನ್ಸ್ ಕಾರ್ಖಾನೆಯಲ್ಲಿ ೧೦ ಸಾವಿರ ಟನ್ ಸಾಮರ್ಥ್ಯದ ಬೃಹತ್ ಅಲ್ಯುಮಿನಿಯಂ ಎಕ್ಸ್‌ಟ್ರೂಷನ್ ಪ್ರೆಸ್ ನಿರ್ಮಾಣಕ್ಕೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಅತ್ಯಾಧುನಿಕ ತಂತ್ರಜ್ಞಾನ ದೇಶದ ರಕ್ಷಣಾ ಉತ್ಪಾದನಾ ವಲಯದಲ್ಲಿ ಅತ್ಯಂತ ಪ್ರಮುಖ ಆಸ್ತಿಯಾಗಲಿದೆ ಎಂದು ಪರಿಗಣಿಸಲಾಗಿದೆ. ಈ ನೂತನ ಯೋಜನೆ ರಕ್ಷಣಾ ಮತ್ತು ಬಾಹ್ಯಾಕಾಶ ಕ್ಷೇತ್ರಗಳ ಅಗತ್ಯತೆಗಳನ್ನು ಪೂರೈಸಲು ಬೇಕಾಗುವ ಬೃಹತ್, ಹೆಚ್ಚಿನ ಸಾಮರ್ಥ್ಯದ ಮತ್ತು ನಿಖರ ಅಲ್ಯುಮಿನಿಯಂ ಮಿಶ್ರ ಲೋಹದ ಉಪಕರಣಗಳನ್ನು ಸ್ವದೇಶದಲ್ಲೇ ತಯಾರಿಸುವ ಭಾರತೀಯ ಸಾಮರ್ಥ್ಯವನ್ನು ಗಣನೀಯವಾಗಿ ಹೆಚ್ಚಿಸಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.ಈ ಯೋಜನೆ ಆತ್ಮ ನಿರ್ಭರ ಭಾರತ್ ಪರಿಕಲ್ಪನೆಯಡಿ ಕಾರ್ಯಗತವಾಗಿದೆ.

*********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕಳೆದ ೧೨ ವರ್ಷಗಳ ಆಡಳಿತವು ದೇಶದ ಅಭಿವೃದ್ಧಿ ಮತ್ತು ಸಾಂಸ್ಕೃತಿಕ ಪರಂಪರೆಯ ಸಂಗಮದ ಸುವರ್ಣ ಯುಗವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಬಣ್ಣಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಈ ಅವಧಿಯಲ್ಲಿ ಶ್ರೀ ರಾಮ ಜನ್ಮಭೂಮಿ ಮಂದಿರ, ಕಾಶಿ ವಿಶ್ವನಾಥ ಕಾರಿಡಾರ್ ಹಾಗೂ ಉಜ್ಜಯಿನಿಯ ಮಹಾಕಾಲ್ ಲೋಕ್ ಯೋಜನೆಗಳು ಸಾಕಾರಗೊಂಡಿವೆ ಎಂದಿದ್ದಾರೆ. ಜೊತೆಗೆ, ಜಾಗತಿಕ ಮಟ್ಟದ ಮೂಲಸೌಕರ್ಯ ಯೋಜನೆಗಳು ಮತ್ತು 'ಮೇಕ್ ಇನ್ ಇಂಡಿಯಾ'

ಉಪಕ್ರಮಗಳು ದೇಶದ ಪ್ರಗತಿಗೆ ಅಭೂತಪೂರ್ವ ವೇಗವನ್ನು ನೀಡಿವೆ ಎಂದು ತಿಳಿಸಿದ್ದಾರೆ.ದೇಶದ ಸಾಂಸ್ಕೃತಿಕ ಅಸ್ಮಿತೆಯನ್ನು ಮರುಸ್ಥಾಪಿಸುವಲ್ಲಿ ಸರ್ಕಾರದ ಕ್ರಮಗಳನ್ನು ಉಲ್ಲೇಖಿಸಿರುವ ಅವರು, ೧ ಕೋಟಿ ಐತಿಹಾಸಿಕ ದಾಖಲೆಗಳ ಡಿಜಿಟಲೀಕರಣ, ವಿದೇಶಗಳಲ್ಲಿದ್ದ ೬೬೮ ಪುರಾತನ ಕಲಾಕೃತಿಗಳ ವಾಪಸಾತಿ, ೧೧ ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರರ ವಸ್ತುಸಂಗ್ರಹಾಲಯಗಳ ಸ್ಥಾಪನೆ ಹಾಗೂ ೧೧ ಭಾರತೀಯ ಭಾಷೆಗಳಿಗೆ ಶಾಸ್ತ್ರೀಯ ಭಾಷಾ ಸ್ಥಾನಮಾನ ನೀಡಿರುವುದನ್ನು ಮುನ್ನೆಲೆಗೆ ತಂದಿದ್ದಾರೆ. ಈ ಎಲ್ಲಾ ಸಾಧನೆಗಳು ದೇಶದ ಆರ್ಥಿಕ ಅಭಿವೃದ್ಧಿ ಮತ್ತು ಸಾಂಸ್ಕೃತಿಕ ಪರಂಪರೆಗಳು ಪರಸ್ಪರ ಪೂರಕವಾಗಿರುವುದಕ್ಕೆ ಸ್ಪಷ್ಟ ಸಾಕ್ಷಿಯಾಗಿದೆ ಎಂದು ಸಚಿವ ಅಮಿತ್ ಶಾ ಪ್ರತಿಪಾದಿಸಿದ್ದಾರೆ.

*********

ಉತ್ತರಪ್ರದೇಶದ ನೊಯ್ಡಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮೊದಲು ಸರಕು ಸಾಗಣೆ ವಿಮಾನ ಯಶಸ್ವಿಯಾಗಿ ಭೂಸ್ಪರ್ಶ ಮಾಡಿದೆ ಎಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ತಿಳಿಸಿದ್ದಾರೆ. ಚೆನ್ನೈನಿಂದ ವಿವಿಧ ಸರಕುಗಳನ್ನು ಹೊತ್ತು ತಂದ ಈ ವಿಮಾನದ ಆಗಮನ ದೇಶದ ವಾಣಿಜ್ಯ ವಲಯದಲ್ಲಿ ಪ್ರಮುಖ ಮೈಲಿಗಲ್ಲಾಗಿದೆ. ಕೇವಲ ೨ ದಿನಗಳ ಹಿಂದೆಯಷ್ಟೇ ಈ ನೂತನ ವಿಮಾನ ನಿಲ್ದಾಣ ತನ್ನ ವಾಣಿಜ್ಯ ಕಾರ್ಯಾಚರಣೆಯನ್ನು ಅಧಿಕೃತವಾಗಿ ಆರಂಭಿಸಿತ್ತು.

*********

ಕಳೆದ ಒಂದು ದಶಕದಲ್ಲಿ ಭಾರತ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಕ್ರೀಡೆ, ಆರೋಗ್ಯ ಮತ್ತು ನಾಗರಿಕ ಭಾಗವಹಿಸುವಿಕೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಯುವಜನರಿಗೆ ಅವಕಾಶಗಳನ್ನು ವ್ಯಾಪಕವಾಗಿ ವಿಸ್ತರಿಸಿದೆ ಎಂದು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ ತಿಳಿಸಿದ್ದಾರೆ. ರಾಷ್ಟ್ರೀಯ ದಿನಪತ್ರಿಕೆಯೊಂದರಲ್ಲಿ ಪ್ರಕಟವಾದ ತಮ್ಮ ಲೇಖನದಲ್ಲಿ ಈ ಕುರಿತು ತಿಳಿಸಿರುವ ಅವರು, ದೇಶದ ಯುವ ಪೀಳಿಗೆಯನ್ನು ಅಮೃತ ಪೀಳಿಗೆ ಎಂದು ಬಣ್ಣಿಸಿದ್ದಾರೆ. ಈ ಪೀಳಿಗೆಯೇ ೨೦೪೭ರ ವೇಳೆಗೆ ಭಾರತವನ್ನು ವಿಕಸಿತ ಭಾರತವನ್ನಾಗಿ ಪರಿವರ್ತಿಸುವ ಮಹತ್ವಾಕಾಂಕ್ಷೆ ಪ್ರಯಣದ ಮುಂದಾಳತ್ವವನ್ನು ವಹಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

*********

ಮಕಾವ್‌ನಲ್ಲಿ ನಡೆಯುತ್ತಿರುವ ಮಕಾವ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತೀಯ ಶೆಟ್ಲರ್‌ಗಳು ಉತ್ತಮ ಪ್ರದರ್ಶನ ತೋರಿದ್ದು, ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಅನ್ಮೋಲ್ ಖಾರ್ಬ್,

ಅಶ್ಮಿತಾ ಚಲಿಹಾ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಪುರುಷರ ವಿಭಾಗದ ಪ್ರಿ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ತರುಣ್ ಮನ್ನೆಪಲ್ಲಿ ಸೋಲನುಭವಿಸಿದ್ದು, ಮಹಿಳಾ ಸಿಂಗಲ್ಸ್‌ನಲ್ಲಿ ಇಶಾರಾಣಿ ಬರುವಾಹ್ ಇಂದು ಮಧ್ಯಾಹ್ನ ನಡೆಯುವ ಪ್ರಿ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಕಣಕ್ಕಿಳಿಯಲಿದ್ದಾರೆ.

*******END******